ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ಬೀದರ್ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಸ್ಥಳ ಮಂಜೂರು ಮಾಡುವ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ(ವಿಧಾನಸಭೆಯಿಂದ ಚುನಾಯಿತರಾದವರು):-

1029 (1135) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ತಾಲ್ಲೂಕಿನ ಕೋಳಾರ (ಕೆ) ಗ್ರಾಮದಲ್ಲಿರುವ ರೇಷ್ಮೆ ಇಲಾಖೆಗೆ ಸೇರಿರುವ ಸರ್ವೆ ನಂ. 287/1 ರಲ್ಲಿ 40 ಎಕರೆ ಜಮೀನು ಮತ್ತು ಕಟ್ಟಡವನ್ನು ಬೀದರ್ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟೆ ಇವರಿಗೆ ಯಾವಾಗ ಮಂಜೂರು ಮಾಡಲಾಗಿದೆ ;

(ಆ) ಕೇಂದ್ರ ಸರ್ಕಾರದ ಐ.ಸಿ.ಎ.ಆರ್. ತಂಡವು ದಿನಾಂಕ : 21-01-2020 ರಲ್ಲಿ ಬೀದರ್ ನಗರಕ್ಕೆ ತಪಾಸಣೆಗೆ ಬಂದ ಸಂದರ್ಭದಲ್ಲಿ ಸದರಿ ಜಾಗವನ್ನು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಮಂಜೂರು ಮಾಡಿರುವ ಬಗ್ಗೆ ವರದಿ ಸಲ್ಲಿಸಿದೆಯೇ ;

(ಇ) ಪ್ರಸ್ತುತ ಸದರಿ ಜಾಗವನ್ನು ಜಿಲ್ಲಾ ಸಂಕೀರ್ಣ ಕಟ್ಟಡ ನಿರ್ಮಾಣಕ್ಕೆ ಹಿಂಪಡೆಯಲಾಗಿದೆಯೇ ; ಹಾಗಿದ್ದಲ್ಲಿ, ಹಾಲಿ ಜಿಲ್ಲಾಧಿಕಾರಿಗಳ ಕಛೇರಿಯ ಕಟ್ಟಡದ ಆವರಣದಲ್ಲಿಯೇ ಜಿಲ್ಲಾ ಸಂಕೀರ್ಣ ಕಟ್ಟಡ ನಿರ್ಮಾಣ ಮಾಡದಿರಲು ಕಾರಣಗಳೇನು ;

(ಈ) ರಾಜ್ಯದಲ್ಲಿಯೇ ಅತ್ಯಂತ ಹಿಂದುಳಿದ ಜಿಲ್ಲೆಯಾದ ಬೀದರ್ ನಗರವು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ ಶಾಶ್ವತವಾಗಿ ವಂಚಿತವಾಗುವುದಿಲ್ಲವೇ ? (ಸಂಪೂರ್ಣ ವಿವರ ನೀಡುವುದು)